# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.01.2026** **19.35 hrs**

***************

ಮುಖ್ಯಾಂಶಗಳು

- ಭಾರತದ ಯುವಕರನ್ನು ಜಗತ್ತು ಇಂದು ವಿಶ್ವಾಸದಿಂದ ನೋಡುತ್ತಿದೆ - ಪ್ರಧಾನಿ ನರೇಂದ್ರ ಮೋದಿ
- ಸಂಸತ್ತಿನ ಬಜೆಟ್ ಅಧಿವೇಶನ; ರಾಷ್ಟ್ರಪತಿ ಭಾಷಣದೊಂದಿಗೆ ಆರಂಭ
- ಬಾರಾಮತಿ ವಿಮಾನ ಅಪಘಾತ; ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಸೇರಿ ಐವರ ಸಾವು; ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಸಂತಾಪ
- ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಟಿ-೨೦ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ, ಫೀಲ್ಡಿಂಗ್ ಆಯ್ಕೆ

***************

ಎನ್‌ಸಿಸಿ, ಭಾರತದ ಯುವಕರನ್ನು ಆತ್ಮವಿಶ್ವಾಸ, ಶಿಸ್ತುಬದ್ಧ ಮತ್ತು ಸೂಕ್ಷ್ಮ ನಾಗರಿಕರನ್ನಾಗಿ ಮಾಡುವ ಒಂದು ಚಳುವಳಿಯಾಗಿದೆ. ಇಂದು ಜಗತ್ತು ಭಾರತದ ಯುವಕರನ್ನು, ಅವರ ಕೌಶಲ್ಯ ಮತ್ತು ಸಂಸ್ಕೃತಿಯಿಂದಾಗಿ ಹೆಚ್ಚಿನ ವಿಶ್ವಾಸದಿಂದ ನೋಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ನವದೆಹಲಿಯ ಕಾರ್ಯಪ್ಪ ಪರೇಡ್ ಮೈದಾನದಲ್ಲಿ ಇಂದು ನಡೆದ ವಾರ್ಷಿಕ ಎನ್‌ಸಿಸಿ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಕೆಲವು ವರ್ಷಗಳಲ್ಲಿ, ಎನ್‌ಸಿಸಿಯ ಬಲವು ೧೪ ರಿಂದ ೨೦ ಲಕ್ಷ ಕೆಡೆಟ್‌ಗಳಿಗೆ ಹೆಚ್ಚಾಗಿದೆ. ಗಡಿ ಮತ್ತು ಕರಾವಳಿ ಪ್ರದೇಶಗಳಿಂದ ಹೆಚ್ಚಿನ ಭಾಗವಹಿಸುವಿಕೆ ಕಂಡುಬಂದಿದೆ. ಈ ವರ್ಷ ಬಾಲಕಿಯರ ಭಾಗವಹಿಸುವಿಕೆಯಲ್ಲಿ ಗಮನಾರ್ಹ ಏರಿಕೆಯಾಗಿದೆ ಎಂದು ಪ್ರಧಾನಿ ಸಂತೋಷ ವ್ಯಕ್ತಪಡಿಸಿದರು.

ಇತ್ತೀಚಿನ ಭಾರತ-ಯುರೋಪಿಯನ್ ಮುಕ್ತ ವ್ಯಾಪಾರ ಒಪ್ಪಂದದ ಬಗ್ಗೆ ಪ್ರಸ್ತಾಪಿಸಿದ ಮೋದಿ, ಒಪ್ಪಂದವು ಬಂಡವಾಳ ಹೂಡಿಕೆ ಮತ್ತು ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಸುಧಾರಿಸುವ ಮೂಲಕ ಭಾರತೀಯ ಸ್ಟಾರ್ಟ್‌ಅಪ್‌ಗಳಿಗೆ ಪ್ರಯೋಜನವನ್ನು ನೀಡುತ್ತದೆ ಮತ್ತು ಭಾರತದ ಸೃಜನಶೀಲ ಆರ್ಥಿಕತೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಭಾರತದ ಯುವಕರು ಶ್ರಮಶೀಲರು ಮಾತ್ರವಲ್ಲದೆ ಹೆಚ್ಚು ವೃತ್ತಿಪರರು ಹಾಗೂ ಅದಕ್ಕಾಗಿಯೇ ಅವರಿಗೆ ಹೆಚ್ಚಿನ ಜಾಗತಿಕ ಬೇಡಿಕೆಯಿದೆ. ಭಾರತೀಯ ವೈದ್ಯರು ಮತ್ತು ಎಂಜಿನಿಯರ್‌ಗಳು ಅನೇಕ ದೇಶಗಳಲ್ಲಿ ವಿಶ್ವ ದರ್ಜೆಯ ಆರೋಗ್ಯ ವ್ಯವಸ್ಥೆಗಳು ಮತ್ತು ಮೂಲಸೌಕರ್ಯಗಳನ್ನು ನಿರ್ಮಿಸುತ್ತಿದ್ದಾರೆ ಮತ್ತು ಶಿಕ್ಷಕರು ವಿದೇಶಗಳಲ್ಲಿ ಸಮಾಜಗಳಿಗೆ ಹೊಸ ಮೌಲ್ಯಗಳನ್ನು ಸೇರಿಸುತ್ತಿದ್ದಾರೆ ಎಂದು ಮೋದಿ ಹೇಳಿದರು.

***************

ಸಂಸತ್ತಿನ ಬಜೆಟ್ ಅಧಿವೇಶನವು ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಉಭಯ ಸದನಗಳ ಜಂಟಿ ಸಭೆಯನ್ನುದ್ದೇಶಿಸಿ ಮಾಡಿದ ಭಾಷಣದೊಂದಿಗೆ ಪ್ರಾರಂಭವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ ಮುರ್ಮು, ಸರ್ಕಾರವು ಸಾಮಾಜಿಕ ನ್ಯಾಯಕ್ಕೆ ಸಂಪೂರ್ಣವಾಗಿ ಬದ್ಧವಾಗಿದೆ ಮತ್ತು ಇದರ ಪರಿಣಾಮವಾಗಿ ಕಳೆದ ದಶಕದಲ್ಲಿ ೨೫ ಕೋಟಿ ನಾಗರಿಕರು ಬಡತನವನ್ನು ನಿವಾರಿಸಿದ್ದಾರೆ. ಆಪರೇಷನ್ ಸಿಂಧೂರ್ ನಂತರ, ಮೇಡ್-ಇನ್-ಇಂಡಿಯಾ ರಕ್ಷಣಾ ವೇದಿಕೆಗಳ ಮೇಲಿನ ವಿಶ್ವಾಸ ಬಲಗೊಂಡಿದೆ ಎಂದು ಅವರು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಮತ್ತು ಅಭಿವೃದ್ಧಿಯನ್ನು ಒದಗಿಸಲು, ವಿಕಸಿತ ಭಾರತ್ ಜಿ ರಾಮ್ ಜಿ ಎಂಬ ಕಾನೂನನ್ನು ಜಾರಿಗೆ ತರಲಾಗಿದೆ. ಈ ಯೋಜನೆ ಗ್ರಾಮೀಣಾಭಿವೃದ್ಧಿಗೆ ಹೊಸ ಆವೇಗವನ್ನು ನೀಡುತ್ತದೆ ಮತ್ತು ರೈತರು, ಜಾನುವಾರು ಸಾಕಣೆದಾರರು ಮತ್ತು ಮೀನುಗಾರರಿಗೆ ಹೊಸ ಸೌಲಭ್ಯಗಳನ್ನು ಸೃಷ್ಟಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು.

***************

ಮಹಾರಾಷ್ಟ್ರದ ಬಾರಾಮತಿ ಬಳಿ ಇಂದು ಬೆಳಗ್ಗೆ ಖಾಸಗಿ ಲಘು ವಿಮಾನ ಪತನಗೊಂಡು, ಉಪಮುಖ್ಯಮಂತ್ರಿ ಅಜಿತ್ ಪವಾರ್ ಸೇರಿದಂತೆ ೫ ಮಂದಿ ಮೃತಪಟ್ಟಿದ್ದಾರೆ.

ಮುಂಬೈನಿಂದ ಬಾರಾಮತಿಗೆ ತೆರಳುತ್ತಿದ್ದ ವಿಮಾನ, ಲ್ಯಾಂಡಿಂಗ್ ವೇಳೆ ಪತನಗೊಂಡು ಈ ದುರಂತ ಸಂಭವಿಸಿದೆ. ಎನ್‌ಸಿಪಿ ನಾಯಕ ಹಾಗೂ  ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಸ್ಥಳೀಯ ಸಂಸ್ಥೆಗಳ ಚುನಾವಣಾ ಪ್ರಚಾರಕ್ಕೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ನಡೆದಿದೆ.

ವಿಮಾನವು ಬಾರಾಮತಿ ವಿಮಾನ ನಿಲ್ದಾಣದ ಬಳಿ ಇಳಿಯುವ ಪ್ರಯತ್ನ ಮಾಡಿತು. ಲ್ಯಾಂಡಿಂಗ್ ಸಮಯದಲ್ಲಿ ನಿಯಂತ್ರಣ ತಪ್ಪಿ ರನ್‌ವೇಯಿಂದ ಜಾರಿದ ವಿಮಾನ ಭೀಕರವಾಗಿ ಪತನಗೊಂಡಿತು. ಘಟನಾ ಸ್ಥಳದಲ್ಲಿ ವಿಮಾನದ ಅವಶೇಷಗಳು ಚದುರಿಕೊಂಡಿದ್ದು, ತಕ್ಷಣವೇ ವಿಮಾನದಿಂದ ದಟ್ಟ ಹೊಗೆ ಮತ್ತು ಬೆಂಕಿ ಕಾಣಿಸಿಕೊಂಡಿತು.

ಅಜಿತ್ ಪವಾರ್ ಅವರಿಗೆ ೬೬ ವರ್ಷ ವಯಸ್ಸಾಗಿತ್ತು. ಪತ್ನಿ ಸುನೇತ್ರಾ ಪವಾರ್, ಪುತ್ರರಾದ ಜೇ ಪವಾರ್ ಮತ್ತು ಪಾರ್ಥ್ ಪವಾರ್ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಅಜಿತ್ ಪವಾರ್, ಮಹಾರಾಷ್ಟ್ರ ರಾಜಕೀಯದಲ್ಲಿ ಪ್ರಬಲ ಶಕ್ತಿಯಾಗಿದ್ದರು. ಅಜಿತ್ ಪವಾರ್ ೧೯೯೧ ರಿಂದ ಏಳು ಬಾರಿ ಬಾರಾಮತಿ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದರು, ಪ್ರತಿ ಬಾರಿಯೂ ಭಾರಿ ಅಂತರದಿಂದ ಗೆದ್ದಿದ್ದಾರೆ.

ಮಹಾರಾಷ್ಟ್ರದಲ್ಲಿ ಅತಿ ಹೆಚ್ಚು ಬಾರಿ ಉಪ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ದಾಖಲೆ ಹೊಂದಿದ್ದ ಅಜಿತ್ ಪವಾರ್ ಅವರು,  ಆಡಳಿತಾತ್ಮಕ ಕುಶಾಗ್ರತೆ, ತ್ವರಿತ ತೀರ್ಮಾನಗಳು, ಕಾರ್ಯವೈಖರಿಗಾಗಿ ಖ್ಯಾತಿ ಪಡೆದಿದ್ದರು.

ಚಿಕ್ಕಪ್ಪ ಶರದ್ ಪವಾರ್ ಅವರ ರಾಜಕೀಯ ಪ್ರಭಾವದಿಂದ ೧೯೮೨ರಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆಯ ನಿರ್ದೇಶಕರ ಮಂಡಳಿಗೆ ಆಯ್ಕೆಯಾಗುವ ಮೂಲಕ ರಾಜಕೀಯಕ್ಕೆ ಪ್ರವೇಶಿಸಿದ ಅವರು, ೨೦೦೪ರ ವಿಧಾನಸಭಾ ಚುನಾವಣೆಯ ನಂತರ ವಿಲಾಸರಾವ್ ದೇಶ್‌ಮುಖ್ ಹಾಗೂ ನಂತರ ಅಶೋಕ್ ಚವಾಣ್ ನೇತೃತ್ವದ ಸರ್ಕಾರಗಳಲ್ಲಿ ಜಲಸಂಪನ್ಮೂಲ ಸಚಿವಾಲಯವನ್ನು ನಿರಂತರವಾಗಿ ನಿರ್ವಹಿಸಿದರು. ೨೦೨೨ರಲ್ಲಿ ಶಿವಸೇನೆ ವಿಭಜನೆಯ ನಂತರ ಮಹಾ ವಿಕಾಸ್ ಅಘಾಡಿ ಸರ್ಕಾರ ಪತನಗೊಂಡಾಗ, ಅಜಿತ್ ಪವಾರ್ ಮಹಾರಾಷ್ಟ್ರ ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸಿದರು. ೨೦೨೩ರಲ್ಲಿ ಅವರು ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷದ ಪ್ರಮುಖ ಬಣವನ್ನು ಮುನ್ನಡೆಸಿ, ಏಕನಾಥ್ ಶಿಂಧೆ ನೇತೃತ್ವದ ಸರ್ಕಾರವನ್ನು ಸೇರಿದರು.

ಇಂದು ರಾಜ್ಯಾದ್ಯಂತ ಸರ್ಕಾರಿ ರಜೆ ಘೋಷಿಸಲಾಗಿದ್ದು, ಮೂರು ದಿನಗಳ ಕಾಲ ರಾಜ್ಯ ಶೋಕಾಚರಣೆ ಆಚರಿಸಲಾಗುವುದು.

***************

ಮಹಾರಾಷ್ಟ್ರದ ಬಾರಾಮತಿ ಬಳಿ ಇಂದು ಬೆಳಗ್ಗೆ ಖಾಸಗಿ ಲಘು ವಿಮಾನ ಪತನಗೊಂಡು ಮೃತಪಟ್ಟಿರುವ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರು ಅಜಿತ್ ಪವಾರ್ ಅವರ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಪವಾರ್ ಅವರ ಅಕಾಲಿಕ ನಿಧನವನ್ನು ಸರಿಪಡಿಸಲಾಗದ ನಷ್ಟ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ವಿಮಾನ ಅಪಘಾತವನ್ನು ತೀವ್ರ ಆಘಾತಕಾರಿ ಮತ್ತು ದುಃಖಕರ ಕ್ಷಣ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ.

ಮಹಾರಾಷ್ಟ್ರದ ಜನರಿಗೆ ಸೇವೆ ಸಲ್ಲಿಸುವಲ್ಲಿ ಮುಂಚೂಣಿಯಲ್ಲಿದ್ದ ಕಠಿಣ ಪರಿಶ್ರಮಿ ನಾಯಕರಾಗಿ ಪವಾರ್ ಅವರನ್ನು ವ್ಯಾಪಕವಾಗಿ ಗೌರವಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

***************

ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಇತರ ನಾಲ್ವರು ಸಾವನ್ನಪ್ಪಿದ ಬಾರಾಮತಿ ವಿಮಾನ ನಿಲ್ದಾಣದಲ್ಲಿ ನಡೆದ ವಿಮಾನ ಅಪಘಾತದ ಬಗ್ಗೆ ವಿಮಾನ ಅಪಘಾತ ತನಿಖಾ ಬ್ಯೂರೋ-ಎಎಐಬಿ ತನಿಖೆ ನಡೆಸಲಿದೆ.

ಎಎಐಬಿ ಮಹಾನಿರ್ದೇಶಕರು ತನಿಖೆಗಾಗಿ ಅಪಘಾತ ಸ್ಥಳಕ್ಕೆ ತಲುಪಿದ್ದು, ಆ ತಂಡವು ದೆಹಲಿಯಿಂದ ಪುಣೆಗೆ ತೆರಳಿದ್ದು, ಸ್ಥಳವನ್ನು ಪರಿಶೀಲಿಸಲು ಮತ್ತು ತನಿಖೆಯನ್ನು ಪ್ರಾರಂಭಿಸಲು ಬಾರಾಮತಿಗೆ ತೆರಳಲಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

***************

ರಾಷ್ಟ್ರಪತಿಗಳ ಭಾಷಣದ ವೇಳೆ ವಿರೋಧ ಪಕ್ಷದ ವರ್ತನೆಯನ್ನು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ರಿಜಿಜು, ಇಂದು ವಿರೋಧ ಪಕ್ಷದವರು ವರ್ತಿಸಿದ ರೀತಿ ದೇಶಕ್ಕೆ ನಾಚಿಕೆಗೇಡಿನ ವಿಷಯವಾಗಿದೆ. ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳನ್ನು ಎಂದಿಗೂ ಕ್ಷಮಿಸಲಾಗುವುದಿಲ್ಲ ಎಂದರು.

'ವಂದೇ ಮಾತರಂ' ೧೫೦ ನೇ ವಾರ್ಷಿಕೋತ್ಸವದಂದು ಮತ್ತು ಬಂಕಿಮ್ ಚಂದ್ರ ಚಟ್ಟೋಪಾಧ್ಯಾಯ ಅವರಿಗೆ ಗೌರವ ಸಲ್ಲಿಸುತ್ತಿರುವಾಗ, ವಿರೋಧ ಪಕ್ಷದವರು ಗದ್ದಲ ಸೃಷ್ಟಿಸಿದರು ಎಂದು ರಿಜಿಜು ಹೇಳಿದರು.

***************

ದೇಶದಾದ್ಯಂತ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಸುಮಾರು ೧೨ ಸಾವಿರ ಆಯುಷ್ ಆರೋಗ್ಯ ಮತ್ತು ಕಲ್ಯಾಣ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು.

ಇಂದು ಕೇರಳದ ಆರ್ಯ ವೈದ್ಯ ಶಾಲಾ ಧರ್ಮಾರ್ಥ ಆಸ್ಪತ್ರೆಯ ಶತಮಾನೋತ್ಸವ ಆಚರಣೆ ಸಂದರ್ಭದಲ್ಲಿ ವರ್ಚುವಲ್ ಮೂಲಕ ಮಾತನಾಡಿದ ಅವರು, ೧೨೫ ವರ್ಷಗಳ ಪಯಣದಲ್ಲಿ ಈ ಸಂಸ್ಥೆ ಆಯುರ್ವೇದವನ್ನು ಶಕ್ತಿಶಾಲಿ ಚಿಕಿತ್ಸಾ ಪದ್ಧತಿಯಾಗಿ ರೂಪಿಸಿದೆ ಎಂದು ಹೇಳಿದರು.

***************

ಗ್ರಾಮೀಣ ಆರೋಗ್ಯ ತರಬೇತಿ ಕೇಂದ್ರ- ಆರ್‌ಎಚ್‌ಟಿಸಿ ಈ ವರ್ಷ ಭಾರತ್ ಪರ್ವ್‌ನಲ್ಲಿ ರೋಗ ತಡೆಗಟ್ಟುವ ಮೂಲಕ ಆರೋಗ್ಯ ರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದೆ.

ಗಣರಾಜ್ಯೋತ್ಸವದ ಅಂಗವಾಗಿ ನವದೆಹಲಿಯ ಕೆಂಪು ಕೋಟೆಯ ಹುಲ್ಲುಹಾಸಿನಲ್ಲಿ, ಆರ್‌ಎಚ್‌ಟಿಸಿ ಸ್ಟಾಲ್ ನೇರ ಪ್ರದರ್ಶನಗಳ ಮೂಲಕ ವ್ಯಾಪಕ ಸಾರ್ವಜನಿಕ ಭಾಗವಹಿಸುವಿಕೆಯನ್ನು ಸೆಳೆಯುತ್ತಿದೆ, ಅಲ್ಲಿ ಸಂದರ್ಶಕರಿಗೆ ಮೂಲಭೂತ ಜೀವ ಉಳಿಸುವ ತಂತ್ರಗಳಲ್ಲಿ ತರಬೇತಿ ನೀಡಲಾಗುತ್ತಿದೆ.

ಆಯುರ್ವೇದ ಸಮಾಲೋಚನೆಗಳ ಜೊತೆಗೆ ಪೋಷಣೆ, ಮಾನಸಿಕ ಆರೋಗ್ಯ ಮತ್ತು ಸಾಮಾನ್ಯ ಯೋಗಕ್ಷೇಮದ ಕುರಿತು ಮಾರ್ಗದರ್ಶನವನ್ನು ಸಹ ಒದಗಿಸಲಾಗುತ್ತಿದೆ ಎಂದು ಪ್ರವಾಸೋದ್ಯಮ ಸಚಿವಾಲಯ ತಿಳಿಸಿದೆ.

***************

ವಿಶಾಖಪಟ್ಟಣಂನ ಎಸಿಎ-ವಿಡಿಸಿಎ ಕ್ರೀಡಾಂಗಣದಲ್ಲಿ ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಟಿ-೨೦ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯ ಇಂದು ನಡೆಯುತ್ತಿದೆ. ಟಾಸ್ ಗೆದ್ದ ಭಾರತ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಇತ್ತೀಚಿನ ವರದಿ ಬಂದಾಗ ನ್ಯೂಜಿಲೆಂಡ್ ೭ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೮೨ ರನ್ ಗಳಿಸಿ ಆಡುತ್ತಿದೆ.

***************

೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭವನ್ನು ನಾಳೆ ನವದೆಹಲಿಯ ವಿಜಯ್ ಚೌಕ್‌ನಲ್ಲಿ ನಡೆಸಲಾಗುವುದು.

ಈ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವರು ಭಾಗವಹಿಸಲಿದ್ದಾರೆ.

*******ಮುಕ್ತಾಯ*******